# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀ ಹನುಮಂತಪ್ಪ ಕಂಚಿಕೆರೆ ಬಿನ್ ಗಂಗಪ್ಪ, ಅಧ್ಯಕ್ಷರು, ಸಾರಥಿ ಗ್ರಾಮ ಪಂಚಾಯತಿ, ಹರಿಹರ ತಾಲ್ಲೂಕು, ದಾವಣಗೆರೆ ಜಿಲ್ಲೆ ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 48(4) & 48(5) ರಡಿ ಕ್ರಮ ಜರುಗಿಸುವ ಕುರಿತು.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 1135 ಗ್ರಾಪಂಅ 2018 ದಿನಾಂಕ:02.02.2019.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ ದಾವಣಗೆರೆ ಜಿಲ್ಲೆ ಇವರ ಪತ್ರ ಸಂಖ್ಯೆ:ಜಿಪಂ:ದಾ:ಅಭಿ(9):ಗ್ರಾವಿಯೋ/ಸಿಆರ್/2018-19 ದಿನಾಂಕ:30.10.2018.
3. ಸರ್ಕಾರದ ಪತ್ರ ಸಂಖ್ಯೆ:ಗ್ರಾಅಪ 202 ಗ್ರಾಪಂಅ 2019 ದಿನಾಂಕ:10.05.2019
4. ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ ಬೆಂಗಳೂರು, ಇವರ ಪತ್ರ ಹಾಗೂ ವಿಚಾರಣಾ ವರದಿ ಸಂಖ್ಯೆ:ಪ್ರಾಆಕ/ಅಭಿವೃದ್ಧಿ/ಸಿಆರ್/35/2019-20, ದಿನಾಂಕ:05.12.2019.

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮಾಂಕ (1)ರ ಸರ್ಕಾರಿ ಆದೇಶದಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43(ಎ) ರಡಿ ಗ್ರಾಮ ಪಂಚಾಯಿತಿ ಸದಸ್ಯರುಗಳು, ಪ್ರಕರಣ 48(4) ಮತ್ತು 48(5) ರಡಿ ಅಧ್ಯಕ್ಷರು ಹಾಗೂ ಉಪಾಧ್ಯಕ್ಷರುಗಳ ಮೇಲೆ ದುರ್ವರ್ತನೆ, ಅಧಿಕಾರ ಮತ್ತು ಹಣ ದುರುಪಯೋಗಕ್ಕಾಗಿ ಕ್ರಮಕೈಗೊಳ್ಳುವ ಸಲುವಾಗಿ ವಿಚಾರಣೆ ನಡೆಸುವ ಅಧಿಕಾರವನ್ನು ಪ್ರಾದೇಶಿಕ ಆಯುಕ್ತರುಗಳಿಗೆ ವಹಿಸಲಾಗಿದೆ.

ಮೇಲೆ ಓದಲಾದ ಕ್ರಮಾಂಕ (2)ರಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ ದಾವಣಗೆರೆ ಇವರು ಶ್ರೀ ಹನುಮಂತಪ್ಪ ಕಂಚಿನಕೆರೆ ಬಿನ್ ಗಂಗಪ್ಪ, ಅಧ್ಯಕ್ಷರು, ಸಾರಥಿ ಗ್ರಾಮ ಪಂಚಾಯತಿ, ಹರಿಹರ ತಾಲ್ಲೂಕು, ದಾವಣಗೆರೆ ಜಿಲ್ಲೆ ಇವರು ಮುಖ್ಯಮಂತ್ರಿ ಗ್ರಾಮ ವಿಕಾಸ ಯೋಜನೆಯಡಿ ಆಯ್ಕೆಯಾಗಿರುವ ಚಿಕ್ಕಬಿದರಿ ಮತ್ತು ಕರಲಹಳ್ಳಿ ಗ್ರಾಮಗಳಲ್ಲಿನ ಯೋಜನೆಗಳನ್ನು ಅನುಷ್ಠಾನಗೊಳಿಸಲು ಸರ್ಕಾರದಿಂದ ಬಿಡುಗಡೆಯಾದ ಅನುದಾನದಲ್ಲಿ ಪ್ರತಿ ಗ್ರಾಮಕ್ಕೆ ರೂ.37.047 ಲಕ್ಷದಂತೆ ಒಟ್ಟು ಎರಡು ಗ್ರಾಮಗಳಿಗೆ ರೂ.74.094 ಲಕ್ಷ ಅನುದಾನವನ್ನು ದಿನಾಂಕ:01.6.2018ರಂದು ಬಿಡುಗಡೆ ಮಾಡಲಾಗಿದ್ದು, ಸದರಿ ಗ್ರಾಮಗಳಲ್ಲಿನ ಯೋಜನೆಗಳನ್ನು ಅನುಷ್ಠಾನಗೊಳಿಸಲು ಅನುಷ್ಠಾನಾಧಿಕಾರಿಗಳಿಗೆ ಹಣ ಬಿಡುಗಡೆ ಮಾಡದೆ ಕರ್ತವ್ಯ ನಿರ್ಲಕ್ಷ್ಯ ಮಾಡಿರುವ ವರದಿಯೊಂದಿಗೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿದ್ದು, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಕಲಂ 48(4)ರಡಿ ಕ್ರಮ ಜರುಗಿಸಲು ಕೋರಿರುತ್ತಾರೆ.

ಅದರಂತೆ, ಮೇಲೆ ಓದಲಾದ ಕ್ರಮಾಂಕ(3)ರಂತೆ ಸದರಿ ಪ್ರಕರಣದ ವಿಚಾರಣೆ ನಡೆಸುವ ಸಲುವಾಗಿ ಪ್ರಾದೇಶಿಕ ಆಯುಕ್ತರು, ಬೆಂಗಳೂರು ರವರಿಗೆ ಕಳುಹಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮಾಂಕ (4) ರಲ್ಲಿ ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ, ಬೆಂಗಳೂರು ಇವರು, ಶ್ರೀ ಹನುಮಂತಪ್ಪ ಕಂಚಿನಕೆರೆ ಬಿನ್ ಗಂಗಪ್ಪ, ಅಧ್ಯಕ್ಷರು, ಸಾರಥಿ ಗ್ರಾಮ ಪಂಚಾಯತಿ, ಹರಿಹರ ತಾಲ್ಲೂಕು, ದಾವಣಗೆರೆ ಜಿಲ್ಲೆ ಇವರ ವಿರುದ್ಧ ಇರುವ ದೂರಿನ ಸಂಬಂಧ ಸರ್ಕಾರದಿಂದ ದಿನಾಂಕ:30.01.2019ರಂದು ಸದರಿಯವರಿಗೆ ನೀಡಿರುವ ಕಾರಣ ಕೇಳಿ ನೋಟೀಸ್‌ಗೆ ಯಾವುದೇ ಸಮಜಾಯಿಷಿಯನ್ನು ನೀಡಿರುವುದಿಲ್ಲ. ನಂತರ ದಿನಾಂಕ:18.07.2019ರಂದು ಶ್ರೀ ಹನುಮಂತಪ್ಪ ಕಂಚಿನಕೆರೆ ಬಿನ್ ಗಂಗಪ್ಪರವರಿಗೆ ಈ ಕಚೇರಿಯಿಂದ ನೋಟೀಸ್ ನೀಡಿ ಖುದ್ದು ಹಾಜರಾಗುವಂತೆ ಸೂಚಿಸಲಾಗಿರುತ್ತದೆ. ಶ್ರೀ ಹನುಮಂತಪ್ಪ ಕಂಚಿನಕೆರೆ ಬಿನ್ ಗಂಗಪ್ಪ ಇವರು ಸದರಿ ವಿಚಾರಣೆಗೆ ಹಾಜರಾಗಿರುವುದಿಲ್ಲ. ಅಲ್ಲದೆ ಅವರ ಮೇಲಿರುವ ದೂರಿಗೆ ಸಂಬಂಧಿಸಿದಂತೆ ಯಾವುದೇ ಲಿಖಿತ

ಹೇಳಿಕೆಯನ್ನು ಸಹ ನೀಡಿರುವುದಿಲ್ಲ. ಮುಖ್ಯಮಂತ್ರಿ ಗ್ರಾಮ ವಿಕಾಸ ಯೋಜನೆಯಡಿ ಆಯ್ಕೆಯಾಗಿರುವ ಚಿಕ್ಕಬಿದರಿ ಮತ್ತು ಕರಲಹಳ್ಳಿ ಗ್ರಾಮಗಳಲ್ಲಿನ ಯೋಜನೆಗಳನ್ನು ಅನುಷ್ಠಾನಗೊಳಿಸಲು ಅನುಷ್ಠಾನಾಧಿಕಾರಿಗಳಿಗೆ ಹಣ ಬಿಡುಗಡೆ ಮಾಡದೆ ಕರ್ತವ್ಯ ನಿರ್ಲಕ್ಷ್ಯ ಮಾಡಿರುವ ಕುರಿತು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ದಾವಣಗೆರೆ ಇವರು ವರದಿ ಮಾಡಿರುವ ಹಿನ್ನೆಲೆಯಲ್ಲಿ ಹಾಗೂ ಈ ದೂರಿನ ಬಗ್ಗೆ ವಿಚಾರಣೆಗೆ ಹಾಜರಾಗಿಲ್ಲದ ಕಾರಣ ಸದರಿಯವರು ಕರ್ತವ್ಯಗಳ ನಿರ್ವಹಣೆಯಲ್ಲಿ ನಿರ್ಲಕ್ಷತೆ ತೋರಿರುವುದು ದೃಢಪಟ್ಟಿರುತ್ತದೆ. ಆದ ಕಾರಣ, ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 43(ಎ), 48(4) ಮತ್ತು 48(5)ರನ್ವಯ ಕ್ರಮ ಜರುಗಿಸಬಹುದಾಗಿರುತ್ತದೆಂದು ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ.

ಈ ಪ್ರಕರಣದ ವಿಚಾರಣೆ ವರದಿ ಮತ್ತು ದಾಖಲೆಗಳನ್ನು ಪರಿಶೀಲಿಸಲಾಗಿ, ಶ್ರೀ ಹನುಮಂತಪ್ಪ ಕಂಚಿನಕೆರೆ ಬಿನ್ ಗಂಗಪ್ಪ, ಅಧ್ಯಕ್ಷರು, ಸಾರಥಿ ಗ್ರಾಮ ಪಂಚಾಯತಿ, ಹರಿಹರ ತಾಲ್ಲೂಕು, ದಾವಣಗೆರೆ ಜಿಲ್ಲೆ ಇವರ ಆಪಾದನೆ ಸಾಬೀತಾಗಿರುವ ಹಿನ್ನೆಲೆಯಲ್ಲಿ ಸದರಿಯವರ ವಿರುದ್ಧ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 ಪ್ರಕರಣದ 48(4) ಮತ್ತು 48(5)ರನ್ವಯ ಅಧ್ಯಕ್ಷ ಸ್ಥಾನ ಹಾಗೂ ಸದಸ್ಯತ್ವದಿಂದ ತೆಗೆದು ಹಾಕಲು ಸರ್ಕಾರವು ನಿರ್ಣಯಿಸಿದೆ.

ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 1095 ಗ್ರಾಪಂಅ 2019 ಬೆಂಗಳೂರು, ದಿನಾಂಕ:24.02.2020**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಹನುಮಂತಪ್ಪ ಕಂಚಿನಕೆರೆ ಬಿನ್ ಗಂಗಪ್ಪ, ಅಧ್ಯಕ್ಷರು, ಸಾರಥಿ ಗ್ರಾಮ ಪಂಚಾಯತಿ, ಹರಿಹರ ತಾಲ್ಲೂಕು, ದಾವಣಗೆರೆ ಜಿಲ್ಲೆ ಇವರು ಮುಖ್ಯಮಂತ್ರಿ ಗ್ರಾಮ ವಿಕಾಸ ಯೋಜನೆಯಡಿ ಆಯ್ಕೆಯಾಗಿರುವ ಚಿಕ್ಕಬಿದರಿ ಮತ್ತು ಕರಲಹಳ್ಳಿ ಗ್ರಾಮಗಳಲ್ಲಿನ ಯೋಜನೆಗಳನ್ನು ಅನುಷ್ಠಾನಗೊಳಿಸಲು ಸರ್ಕಾರದಿಂದ ಬಿಡುಗಡೆಯಾದ ಅನುದಾನದಲ್ಲಿ ಪ್ರತಿ ಗ್ರಾಮಕ್ಕೆ ರೂ.37.047 ಲಕ್ಷದಂತೆ ಒಟ್ಟು ಎರಡು ಗ್ರಾಮಗಳಿಗೆ ರೂ.74.094 ಲಕ್ಷ ಅನುದಾನವನ್ನು ದಿನಾಂಕ:01.6.2018ರಂದು ಬಿಡುಗಡೆ ಮಾಡಲಾಗಿದ್ದು, ಸದರಿ ಗ್ರಾಮಗಳಲ್ಲಿನ ಯೋಜನೆಗಳನ್ನು ಅನುಷ್ಠಾನಗೊಳಿಸಲು ಅನುಷ್ಠಾನಾಧಿಕಾರಿಗಳಿಗೆ ಹಣ ಬಿಡುಗಡೆ ಮಾಡದೆ ಕರ್ತವ್ಯ ನಿರ್ಲಕ್ಷ್ಯ ಮಾಡಿರುವ ಹಾಗೂ ಗ್ರಾಮ ಪಂಚಾಯಿತಿ ಅಧ್ಯಕ್ಷರು ಸಮರ್ಪಕವಾಗಿ ಜವಾಬ್ದಾರಿಯುತವಾಗಿ ತಮ್ಮ ಕರ್ತವ್ಯಗಳನ್ನು ನಿಭಾಯಿಸದೆ ಇರುವುದು ಸಾಬೀತಾಗಿದೆ. ಆದುದರಿಂದ ಶ್ರೀ ಹನುಮಂತಪ್ಪ ಕಂಚಿನಕೆರೆ ಬಿನ್ ಗಂಗಪ್ಪ, ಅಧ್ಯಕ್ಷರು, ಸಾರಥಿ ಗ್ರಾಮ ಪಂಚಾಯತಿ, ಹರಿಹರ ತಾಲ್ಲೂಕು, ದಾವಣಗೆರೆ ಜಿಲ್ಲೆ ಇವರನ್ನು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣದ 48(4) ಮತ್ತು 48(5)ರನ್ವಯ ಸಾರಥಿ ಗ್ರಾಮ ಪಂಚಾಯತಿಯ ಅಧ್ಯಕ್ಷ ಸ್ಥಾನ ಹಾಗೂ ಸದಸ್ಯತ್ವದಿಂದ ತಕ್ಷಣ ಜಾರಿಗೆ ಬರುವಂತೆ ತೆಗೆದು ಹಾಕಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

B. Naveenkumar 24/02/2020.
(ನವೀನ್ ಕುಮಾರ್. ಬಿ)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,(ಗ್ರಾ.ಪಂ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಇವರಿಗೆ:**

1. ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ ಬೆಂಗಳೂರು, 2ನೇ ಮಹಡಿ, ಬಿ.ಎಂ.ಟಿ.ಸಿ. ಕಟ್ಟಡ, ಶಾಂತಿನಗರ, ಕೆ.ಹೆಚ್. ರಸ್ತೆ, ಬೆಂಗಳೂರು.
2. ಜಿಲ್ಲಾಧಿಕಾರಿ, ದಾವಣಗೆರೆ ಜಿಲ್ಲೆ, ದಾವಣಗೆರೆ.
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ ದಾವಣಗೆರೆ ಜಿಲ್ಲೆ.

4. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ಹರಿಹರ ತಾಲ್ಲೂಕು, ದಾವಣಗೆರೆ ಜಿಲ್ಲೆ.
5. ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಸಾರಥಿ ಗ್ರಾಮ ಪಂಚಾಯತಿ, ಹರಿಹರ ತಾಲ್ಲೂಕು, ದಾವಣಗೆರೆ ಜಿಲ್ಲೆ.
6. ಶ್ರೀ ಹನುಮಂತಪ್ಪ ಕಂಚಿನಕೆರೆ ಬಿನ್ ಗಂಗಪ್ಪ, ಅಂದಿನ ಅಧ್ಯಕ್ಷರು, ಸಾರಥಿ ಗ್ರಾಮ ಪಂಚಾಯತಿ, ಹರಿಹರ ತಾಲ್ಲೂಕು, ದಾವಣಗೆರೆ ಜಿಲ್ಲೆ **(ಇವರಿಗೆ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ಹರಿಹರ, ದಾವಣಗೆರೆ ಜಿಲ್ಲೆ ಇವರ ಮುಖಾಂತರ)**
7. ಗಣಕ ಕೋಶ.

**ಪ್ರತಿಯನ್ನು ಮಾಹಿತಿಗಾಗಿ:**

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್)ರವರ ಆಪ್ತ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3) ಕಛೇರಿ ಪ್ರತಿ/ಹೆಚ್ಚುವರಿ ಪ್ರತಿ.